# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 612

ಸದಸ್ಯರ ಹೆಸರು : ಶ್ರೀ. ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 20.02.2024

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ತೋಟಗಾರಿಕಾ ಇಲಾಖೆಯಲ್ಲಿ ತೋಟಗಾರಿಕಾ ಬೆಳೆಗಳಿಗೆ ಸರ್ಕಾರ ರೂಪಿಸಿದ ಯೋಜನೆಗಳು ಯಾವುವು; ಈ ಯೋಜನೆಗಳಿಗೆ ನೀಡಲಾದ ಸಹಾಯಧನದ ಮೊತ್ತ ಎಷ್ಟು; ಯಾವ ಮಾನದಂಡದಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುತ್ತದೆ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು) | ಕಳೆದ 3 ವರ್ಷಗಳಲ್ಲಿ ಅಂದರೆ 2020-21 ರಿಂದ 2022-23ರವರೆಗೆ ಬೀದರ್ ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳಿಗೆ ತೋಟಗಾರಿಕಾ ಇಲಾಖೆಯು ರೂಪಿಸಿರುವ ಯೋಜನೆಗಳ ವಿವರವನ್ನು ಅನುಬಂಧ-1ರಲ್ಲಿ ಒದಗಿಸಲಾಗಿದೆ. ಈ ಯೋಜನೆಗಳಿಗೆ ನೀಡಲಾದ ಸಹಾಯಧನದ ಮೊತ್ತ ರೂ. 44.90 ಕೋಟಿಗಳು ವರ್ಷವಾರು ವಿವರ ಕೆಳಕಂಡಂತಿದೆ<br><br>ಕ್ರ. ಸಂ \| ವರ್ಷ \| ಅನುದಾನ (ರೂ. ಕೋಟಿಗಳಲ್ಲಿ)<br>1 \| 2020-21 \| 17.22<br>2 \| 2021-22 \| 16.18<br>3 \| 2022-23 \| 11.50<br>ಒಟ್ಟಾರೆ \| 44.90<br><br>ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಅನುಸರಿಸುವ ಮಾನದಂಡಗಳು ಈ ಕೆಳಕಂಡಂತಿವೆ:<br>1. ಫಲಾನುಭವಿಯು ರೈತರಾಗಿದ್ದು, ಜಮೀನು ಅವರ ಹೆಸರಿನಲ್ಲಿರಬೇಕು. ಜಂಟಿ ಖಾತೆಯಾಗಿದ್ದಲ್ಲಿ ಇತರೆ ಖಾತೆದಾರರ ಒಪ್ಪಿಗೆ ಪತ್ರ ಪಡೆದಿರಬೇಕು. ತಂದೆ ಅಥವಾ ತಾಯಿ ಹೆಸರಿನಲ್ಲಿ ಜಮೀನಿದ್ದು, ಅವರು ಮರಣ ಹೊಂದಿದ್ದಲ್ಲಿ ಮಾತ್ರ ಗ್ರಾಮ ಲೆಕ್ಕಾಧಿಕಾರಿಯಿಂದ ದೃಢೀಕರಿಸಿ, ಕುಟುಂಬದ ಇತರೆ ಸದಸ್ಯರಿಂದ ಒಪ್ಪಿಗೆ ಪಡೆದ ನಂತರದಲ್ಲಿ ಫಲಾನುಭವಿಯ ಹೆಸರಿನಲ್ಲಿ ಅರ್ಜಿ ಪಡೆಯುವುದು.<br>2. ಮಹಿಳೆಯ ಹೆಸರಿನಲ್ಲಿ ಖಾತ ಹೊಂದಿದ್ದಲ್ಲಿ, ಮಹಿಳೆಯರ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸುವುದನ್ನು ಉತ್ತೇಜಿಸಲಾಗುವುದು.<br>3. ಅರ್ಹ ಅರ್ಜಿದಾರರ ಹೆಸರುಗಳನ್ನು ಜೇಷ್ಠತಾ ವಹಿಯನ್ನು ನಿರ್ವಹಿಸಿ ಜೇಷ್ಠತೆ ಆಧಾರದ ಮೇಲೆ ಸಹಾಯಧನಕ್ಕೆ ಪರಿಗಣಿಸಲಾಗುವುದು.<br>4. ರೈತ ಫಲಾನುಭವಿಯು ಪರಿಶಿಷ್ಟ ಜಾತಿ (SC) ಮತ್ತು ಪರಿಶಿಷ್ಟ ಪಂಗಡ (ST)ಕ್ಕೆ ಸೇರಿದವರಾದಲ್ಲಿ ನಿಗಧಿತ ದಾಖಲಾತಿಗಳೊಂದಿಗೆ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸುವುದು |



File No. HORTI/77/HGM/2024-admn-Horti-sec (Computer No. 1323893)

Generated from eOffice by NIJAGUNAMURTY NP, HORTI-ASST(NMP), ASSISTANT, SECRETARIAT - HORTICULTURE on 19/05/2025 11:30 AM

<table>
<tr>
<td></td>
<td></td>
<td>ಕಡ್ಡಾಯವಾಗಿರುತ್ತದೆ<br>5. ಈ ಹಿಂದೆ ಇಲಾಖೆಯಿಂದ ಯಾವುದೇ ಸಹಾಯಧನ ಪಡೆಯದ ಹೊಸ ಫಲಾನುಭವಿಗಳಿಗೆ ಆದ್ಯತೆ ನೀಡಲಾಗುವುದು.<br>6. ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಆದ್ಯತೆ ನೀಡಲಾಗುವುದು.<br>7. ಈ ಹಿಂದೆ ಇಲಾಖೆಯಿಂದ ಸಹಾಯಧನ ಪಡೆದ ಫಲಾನುಭವಿಗಳು ಕಾರ್ಯಕ್ರಮದ ಸರ್ಮಪಕ/ಸದ್ಬಳಕೆ ಮಾಡದ್ದಿದ್ದಲ್ಲಿ ಅಂತಹ ಫಲಾನುಭವಿಗಳನ್ನು ಹೊಸ ಘಟಕ/ಕಾರ್ಯಕ್ರಮಗಳಿಗೆ ಅರ್ಜಿ ಸಲ್ಲಿಸಿದ್ದಲ್ಲಿ ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.<br>ತಾಲ್ಲೂಕುವಾರು, ಯೋಜನೆವಾರು ವಿವರವನ್ನು CD ಯ ಅನುಬಂಧ-1 ರಲ್ಲಿ ಒದಗಿಸಲಾಗಿದೆ</td>
</tr>
<tr>
<td>ಆ)</td>
<td>ಕಳೆದ 3 ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ತೋಟಗಾರಿಕಾ ಇಲಾಖೆಯಲ್ಲಿ ವಿವಿಧ ಯೋಜನೆಗಳಿಗೆ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳ ಸಂಖ್ಯೆ ಎಷ್ಟು; ಫಲಾನುಭವಿಗಳವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು.</td>
<td>ಕಳೆದ 3 ವರ್ಷಗಳಲ್ಲಿ ಅಂದರೆ 2020-21 ರಿಂದ 2022-23ರವರೆಗೆ ಬೀದರ್ ಜಿಲ್ಲೆಯಲ್ಲಿ ತೋಟಗಾರಿಕಾ ಇಲಾಖೆಯಲ್ಲಿ ವಿವಿಧ ಯೋಜನೆಗಳಿಗೆ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಿದ ಫಲಾನುಭವಿಗಳ ಸಂಖ್ಯೆ 8435 ವರ್ಷವಾರು ವಿವರ ಕೆಳಕಂಡಂತಿದೆ
<table>
<tr><th>ಕ್ರ. ಸಂ</th><th>ವರ್ಷ</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>1</td><td>2020-21</td><td>2908</td></tr>
<tr><td>2</td><td>2021-22</td><td>3443</td></tr>
<tr><td>3</td><td>2022-23</td><td>2084</td></tr>
<tr><td colspan="2">ಒಟ್ಟಾರೆ</td><td>8435</td></tr>
</table>
ಫಲಾನುಭವಿಗಳವಾರು, ತಾಲ್ಲೂಕುವಾರು ವಿವರವನ್ನು CDಯ ಅನುಬಂಧ-2a, 2b, 2c ರಲ್ಲಿ ಒದಗಿಸಲಾಗಿದೆ.</td>
</tr>
<tr>
<td>ಇ)</td>
<td>ಬೀದರ್ ಜಿಲ್ಲೆಯಲ್ಲಿನ ತೋಟಗಾರಿಕೆ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರು ರೈತರಿಗೆ ಸರಿಯಾದ ರೀತಿಯಲ್ಲಿ ಯೋಜನೆಯ ಮಾಹಿತಿ ನೀಡದೇ ಇರಲು ಕಾರಣಗಳೇನು; ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ಯೋಜನೆಗಳ ಮಾಹಿತಿಯನ್ನು ಸರಿಯಾಗಿ ನೀಡದಂತಹ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)</td>
<td>ಬೀದರ್ ಜಿಲ್ಲೆಯಲ್ಲಿನ ತೋಟಗಾರಿಕೆ ಇಲಾಖೆಯ ಅಧಿಕಾರಿ/ಸಿಬ್ಬಂದಿಯವರು ತೋಟಗಾರಿಕೆ ಇಲಾಖೆಯ ಯೋಜನೆಗಳ ಮಾರ್ಗಸೂಚಿಯನ್ವಯ ರೈತ ಬಾಂಧವರಿಗೆ, ಸವಲತ್ತುಗಳನ್ನು ನಿಯಮಾನುಸಾರ ಒದಗಿಸುತ್ತಿದ್ದಾರೆ. ಯೋಜನೆಗಳ ಕುರಿತು ಗ್ರಾಮ ಮಟ್ಟದಲ್ಲಿ ಜಾಗೃತ ಸಭೆಗಳನ್ನು ನಡೆಸಲಾಗುತ್ತಿದೆ. ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತ ಬಾಂಧವರ ಮನೆಗಳಿಗೆ ಖುದ್ದಾಗಿ ಭೇಟಿ ನೀಡಿ ಯೋಜನೆಗಳ ಸವಲತ್ತುಗಳ ಕುರಿತು ಮುದ್ದಾಮ ಮಾಹಿತಿ ನೀಡಲಾಗುತ್ತಿದೆ. ಸುದ್ದಿ ಮಾದ್ಯಮಗಳಲ್ಲಿ ಪತ್ರಿಕಾ ಪ್ರಕಟಣೆ ಹೊರಡಿಸಿ, ಅರ್ಜಿಗಳನ್ನು ಅಹ್ವಾನಿಸಲಾಗುತ್ತಿದ್ದು, ಕಾಲ ಕಾಲಕ್ಕೆ ಪರಿಶೀಲನೆ ನಡೆಸಲಾಗುತ್ತಿದೆ.</td>
</tr>
</table>

HORTI 77 HGM 2024

**(ಎಸ್.ಎಸ್.ಮಲ್ಲಿಕಾರ್ಜುನ್)**

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು



File No. HORTI/77/HGM/2024-admn-Horti-sec (Computer No. 1323893)
Generated from eOffice by NIJAGUNAMURTY NP, HORTI-ASST(NMP), ASSISTANT, SECRETARIAT - HORTICULTURE on 19/05/2025 11:31 AM